ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೪

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೦೬ನೇ ಫೆಬ್ರವರಿ, ೨೦೧೫**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಕೊಪ್ಪಳ ಜಿಲ್ಲೆಯಲ್ಲಿ ಶಿಕ್ಷಕರನ್ನು ಬೋಧಕೇತರ ಕಾರ್ಯಕ್ಕೆ ನಿಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬ (೪೬೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಪ್ಪಳ ಜಿಲ್ಲೆಯಲ್ಲಿ ಶಿಕ್ಷಕರನ್ನು ಬೋಧಕೇತರ ಕಾರ್ಯಕ್ಕೆ ನಿಯೋಜಿಸಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಶಿಕ್ಷಕರನ್ನು ಯಾವ ಯಾವ ಕಾರ್ಯಗಳಿಗೆ ಉಪಯೋಗಿಸಿಕೊಳ್ಳಲಾಗಿದೆ ; ಎಷ್ಟು ವರ್ಷಗಳಿಂದ ಸದರಿ ಶಿಕ್ಷಕರು ಬೋಧಕೇತರ ಕಾರ್ಯದಲ್ಲಿ ತೊಡಗಿದ್ದಾರೆ ; (ವಿವರಗಳನ್ನು ನೀಡುವುದು)

(ಇ) ಶಿಕ್ಷಕರನ್ನು ಬೋಧಕೇತರ ಕಾರ್ಯಕ್ಕೆ ನಿಯೋಜಿಸಿಕೊಳ್ಳುವುದು ಕ್ರಮ ಬದ್ಧವಾಗಿದೆಯೇ ; ಮಾರ್ಗಸೂಚಿಗಳಲ್ಲಿ ಇದಕ್ಕೆ ಅವಕಾಶವಿದೆಯೇ ;

ಈ) ಅವಕಾಶವಿಲ್ಲದಿದ್ದರೆ, ಶಿಕ್ಷಕರನ್ನು ಮೂಲ ಕಾರ್ಯಸ್ಥಾನಗಳಿಗೆ ಹಿಂಪಡೆಯುವಲ್ಲಿ ಇರುವ ಅಡೆತಡೆಗಳೇನು ?

## ಕಲ್ಬುರ್ಗಿ ವಿಮಾನ ನಿಲ್ದಾಣದ ಕಾಮಗಾರಿ ಸ್ಥಗಿತಗೊಂಡಿರುವುದು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೪೭ (೪೪೬) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲ್ಬುರ್ಗಿ ವಿಮಾನ ನಿಲ್ದಾಣದ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವಾಗಿನಿಂದ ಸ್ಥಗಿತಗೊಂಡಿರುತ್ತದೆ ; ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಈ ವಿಮಾನ ನಿಲ್ದಾಣದ ಕಾಮಗಾರಿಗಾಗಿ ಗುತ್ತಿಗೆದಾರರು ಸದರಿ ವಿಮಾನ ನಿಲ್ದಾಣದ ಸರ್ಕಾರಿ ಜಮೀನನ್ನು ಬ್ಯಾಂಕ್/ಹಣಕಾಸು ಸಂಸ್ಥೆಗಳಿಗೆ ಅಡವಿಟ್ಟು ಸಾಲ ಪಡೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಬ್ಯಾಂಕ್‌ನಲ್ಲಿ ಎಷ್ಟು ಮೊತ್ತಕ್ಕೆ ಎಂಬ ಬಗ್ಗೆ ಮಾಹಿತಿಯನ್ನು ನೀಡುವುದು ;

(ಇ) ಕಲ್ಬುರ್ಗಿ ವಿಮಾನ ನಿಲ್ದಾಣ ಕಾಮಗಾರಿ ಸಮಸ್ಯೆಗಳನ್ನು ನಿವಾರಣೆ ಮಾಡಿ ಪುನರಾರಂಭಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಾಗುವುದೇ ; ಈ ಬಗ್ಗೆ ಸರ್ಕಾರದ ಮುಂದಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ?

## ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಯ ನೌಕರರ ವೇತನ ಬಡ್ತಿ ಸೌಲಭ್ಯ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೪೮ (೪೮೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ನೌಕರರಿಗೆ ೬ನೇ ವೇತನ ಸಮಿತಿ ನೀಡಿದ ೬, ೭ ಹಾಗೂ ೮ನೇ ಸ್ಥಗಿತ ವೇತನ ಬಡ್ತಿ ಸೌಲಭ್ಯವನ್ನು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಯ ನೌಕರರಿಗೂ ವಿಸ್ತರಿಸಲಾಗಿದೆಯೇ ;

(ಆ) ಹಾಗಿಲ್ಲವಾದರೆ, ಈ ಸೌಲಭ್ಯವನ್ನು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಯ ಸಿಬ್ಬಂದಿಗೆ ವಿಸ್ತರಿಸುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ ;

(ಇ) ಸರ್ಕಾರಿ ಮಹಿಳಾ ನೌಕರರಿಗೆ ೬ನೇ ವೇತನ ಸಮಿತಿಯು ನೀಡಿರುವ ೧೮೦ ದಿನಗಳ ಪ್ರಸೂತಿ ರಜೆಯ ಸೌಲಭ್ಯವನ್ನು ಖಾಸಗಿ ಅನುದಾನಿತ ಮಹಿಳಾ ಸಿಬ್ಬಂದಿಗೆ ಯಾವಾಗ ವಿಸ್ತರಿಸಲಾಗುವುದು ?

## ಶಿಥಿಲಾವಸ್ಥೆಯಲ್ಲಿರುವ ಶಾಲೆಗಳು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯ (೪೯೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ; ಬಾಡಿಗೆ ಕಟ್ಟಡಗಳನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಕಟ್ಟಡಗಳ ದುರಸ್ಥಿಗೆಂದು ಕಳೆದ ಎರಡು ವರ್ಷಗಳಲ್ಲಿ ಮಂಜೂರು ಮಾಡಿರುವ ಮೊತ್ತವೆಷ್ಟು ; (ಶಾಲಾವಾರು ಮಾಹಿತಿ ನೀಡುವುದು)

ಈ) ಅನೇಕ ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯಗಳ ಕೊರತೆ, ಕೊಠಡಿಗಳ ಕೊರತೆ, ಶೌಚಾಲಯಗಳ ಕೊರತೆ, ಕುಡಿಯುವ ನೀರಿನ ಕೊರತೆ, ಶಿಥಿಲಗೊಂಡ ಕೊಠಡಿಗಳಲ್ಲಿ ವ್ಯಾಸಂಗ ಇಂತಹ ಅನೇಕ ಸಮಸ್ಯೆಗಳಿಂದ ಮಕ್ಕಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಉ) ಹಾಗಿದ್ದರೆ, ಅಂತಹ ಶಾಲೆಗಳಾವುವು ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವೈದ್ಯಕೀಯ ವೆಚ್ಚ ಮರುಪಾವತಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) –**

೫೦ (೪೫೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಪಾವತಿಸಲು ಬಾಕಿ ಇರುವ ವೈದ್ಯಕೀಯ ವೆಚ್ಚ ಹಾಗೂ ಮರು ಪಾವತಿಯ ಪ್ರಮಾಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇಷ್ಟು ದೊಡ್ಡ ಪ್ರಮಾಣದ ಹಣವನ್ನು ಬಾಕಿ ಇಟ್ಟುಕೊಳ್ಳಲು ಕಾರಣಗಳೇನು ;

(ಇ) ಬಾಕಿ ಇರುವ ವೈದ್ಯಕೀಯ ವೆಚ್ಚವನ್ನು ಮರು ಪಾವತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ನಗರ ಕೇಂದ್ರ ರೈಲ್ವೆ ನಿಲ್ದಾಣ ಮತ್ತು ನಾಯಂಡಹಳ್ಳಿ ನಿಲ್ದಾಣದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೫೧ (೪೮೧) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರ ಕೇಂದ್ರ ರೈಲ್ವೆ ನಿಲ್ದಾಣ ಮತ್ತು ನಾಯಂಡಹಳ್ಳಿ ರೈಲ್ವೆ ನಿಲ್ದಾಣದ ನಡುವೆ ಇರುವ ನೂತನ ಶ್ರೀ ಕೃಷ್ಣದೇವರಾಯ ರೈಲ್ವೆ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ, ನಿಲ್ದಾಣದಲ್ಲಿ ಫ್ಲಾಟ್‌ಫಾರ್ಮ್ ವ್ಯವಸ್ಥೆಯೇ ಇಲ್ಲದೇ ಜನರು ಮಳೆಯಲ್ಲಿ, ಬಿಸಿಲಿನಲ್ಲಿಯೇ ರೈಲಿಗಾಗಿ ಕಾಯುವ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ;

(ಆ) ಈ ರೈಲ್ವೆ ನಿಲ್ದಾಣಕ್ಕೆ ಯಾವ ಕಾಲಮಿತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ?

## ಬೆಂಗಳೂರು ನಗರದಲ್ಲಿರುವ ಆಂಗ್ಲ ಮಾಧ್ಯಮ ಶಾಲೆಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೫೨ (೪೬೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿರುವ ಆಂಗ್ಲ ಮಾಧ್ಯಮ ಶಾಲೆಗಳ ಸಂಖ್ಯೆ ಎಷ್ಟು ; (ICSC, CBSC ಮತ್ತು ಇತರ ಸಂಯೋಜನೆಗೆ ಒಳಪಟ್ಟವುಗಳ ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಯಾವ ಹಂತದವರೆಗೆ ವಿದ್ಯಾಭ್ಯಾಸ ನೀಡಲು ಅನುಮತಿ ನೀಡಲಾಗಿದೆ ; ಪ್ರತಿಯೊಂದು ಶಾಲೆಯಲ್ಲಿರುವ ತರಗತಿ ಮತ್ತು ಮಕ್ಕಳ ಸಂಖ್ಯೆ, ಶಾಲೆಯ ಹೆಸರು ಮತ್ತು ವಿಳಾಸ ಹಾಗೂ ಈ ಶಾಲೆಗಳನ್ನು ನಡೆಸುತ್ತಿರುವವರ ಹೆಸರು ಮತ್ತು ವಿಳಾಸವನ್ನು ನೀಡುವುದು ;

(ಇ) ಬೆಂಗಳೂರು ನಗರದಲ್ಲಿ ಅನ್ಯ ರಾಜ್ಯದವರು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ? (ಶಾಲೆಯ ಹೆಸರು ಮತ್ತು ವಿಳಾಸ ಹಾಗೂ ಈ ಶಾಲೆಗಳನ್ನು ನಡೆಸುತ್ತಿರುವವರ ಹೆಸರು ಮತ್ತು ವಿಳಾಸವನ್ನು ನೀಡುವುದು)

## ಕೊಡಗು ಜಿಲ್ಲೆ ಪ್ರವಾಸಿ ತಾಣದ ಅಭಿವೃದ್ಧಿಗೆ ನೀಡಿದ ಅನುದಾನ ಬಗ್ಗೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೫೩ (೪೧೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯನ್ನು ಪ್ರವಾಸಿ ತಾಣವೆಂದು ಸರ್ಕಾರ ಗುರುತಿಸಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಎಷ್ಟು ಅನುದಾನವನ್ನು ನೀಡಿದೆ ; (ವರ್ಷಾವಾರು, ರಾಜ್ಯ ಸರ್ಕಾರ ಕೇಂದ್ರ ಸರ್ಕಾರ ನೀಡಿದ ಅನುದಾನವನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಸದರಿ ಅಭಿವೃದ್ಧಿ ಕಾಮಗಾರಿಗಳು ಎಲ್ಲೆಲ್ಲಿ ಪ್ರಾರಂಭಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಆರ್.ಎಂ.ಎಸ್. ಸಂಯುಕ್ತ ಪ್ರೌಢ ಶಾಲೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೫೪ (೪೦೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ ಮಂಜೂರಾತಿಗಾಗಿ ಪ್ರಾರಂಭವಾದ ಸಂಯುಕ್ತ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಶಾಲೆಗಳಿಗೆ ಯಾವ ಯಾವ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ ; ಇಲ್ಲವಾದಲ್ಲಿ, ಕಾರಣವೇನು ;

(ಇ) ಸದರಿ ಶಾಲೆಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು, ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

ಈ) ಸಂಯುಕ್ತ ಪ್ರೌಢ ಶಾಲೆಗಳಿಗೆ ಕಟ್ಟಡಗಳು ಮಂಜೂರಾಗಿ ಕಾಮಗಾರಿ ಪ್ರಾರಂಭಗೊಂಡವುಗಳು ಎಷ್ಟು ; ಕಾಮಗಾರಿ ಪ್ರಾರಂಭವಾಗಿ ಅರ್ಧಕ್ಕೆ ನಿಂತಿರುವ ಕಟ್ಟಡಗಳು ಎಷ್ಟು ; ಇನ್ನು ಕಾಮಗಾರಿ ಪ್ರಾರಂಭಗೊಳ್ಳದ ಕಟ್ಟಡಗಳು ಎಷ್ಟು ; ಕಾಮಗಾರಿ ಪ್ರಾರಂಭಗೊಂಡು ಪೂರ್ಣಗೊಂಡ ಕಟ್ಟಡಗಳು ಎಷ್ಟು ? (ತಾಲ್ಲೂಕುವಾರು, ಶಿಕ್ಷಣ ಸಂಸ್ಥೆವಾರು, ಕಾಮಗಾರಿ ನಿರ್ವಹಿಸುತ್ತಿರುವ ಗುತ್ತಿಗೆದಾರರ ಹೆಸರಿನೊಂದಿಗೆ ವಿವರ ನೀಡುವುದು)

## ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು ) –**

೫೫ (೩೮೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳು ಎಷ್ಟು ; ಇವುಗಳು ಪ್ರಾರಂಭಗೊಂಡಿದ್ದು ಯಾವಾಗ ; ಯಾವ ಯಾವ ಅವಧಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಓಬಿಸಿ, ಅಲ್ಪಸಂಖ್ಯಾತರು ಹಾಗೂ ಸಾಮಾನ್ಯ ವರ್ಗದವರನ್ನು ಉಪಕುಲಪತಿಗಳಾಗಿ ನೇಮಕ ಮಾಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಆ) ೨೦೧೧–೧೨, ೨೦೧೨–೧೩ ಮತ್ತು ೨೦೧೩–೧೪ರ ಅವಧಿಯಲ್ಲಿ ಯಾವ ಯಾವ ವಿಶ್ವವಿದ್ಯಾಲಯಗಳಿಗೆ ಪರಿಶಿಷ್ಟ ಪಂಗಡದ ಕುಲಪತಿಗಳು ನೇಮಕವಾಗಿದ್ದಾರೆ ; ಇಲ್ಲದಿದ್ದಲ್ಲಿ, ಕಾರಣಗಳೇನು ?

## ಮದ್ಯ ಮಾರಾಟ ಮಾಡಲು ಪರವಾನಿಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೫೬ (೪೫೦) ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಔತಣಕೂಟಗಳಲ್ಲಿ ಅಂದರೆ, ಸಭಾಭವನಗಳಲ್ಲಿ ಮದುವೆ ಹುಟ್ಟುಹಬ್ಬಗಳ ಆಚರಣೆ ಸಂದರ್ಭಗಳಲ್ಲಿ ಆಮಂತ್ರಿತ ಅತಿಥಿಗಳಿಗೆ ಮದ್ಯ ನೀಡಲು ಅಬಕಾರಿ ಇಲಾಖೆಯಿಂದ ಅನುಮತಿ ಪಡೆಯಬೇಕೆಂಬುದು ಸರಿಯೇ ;

(ಆ) ಇಲಾಖೆಯ ಅಧಿಕಾರಿಗಳು CL5 ಮಾರಾಟದ ಪರವಾನಿಗೆ ಪಡೆಯಲು ಒತ್ತಾಯಿಸುತ್ತಿರುವುದು ನಿಜವೇ ;

(ಇ) ಸರ್ಕಾರಿ ಮಳಿಗೆಯಿಂದ ಸುಂಕ ಪಾವತಿ ಮಾಡಿದ ಮೇಲೆ ತಮ್ಮ ಕುಟುಂಬದ ಸಮಾರಂಭಗಳಲ್ಲಿ ವಿತರಿಸುತ್ತಿರುವ ಮದ್ಯಕ್ಕೆ ಮಾರಾಟ ಮಾಡಲು ಪರವಾನಿಗೆ ಒತ್ತಾಯಿಸುತ್ತಿರುವ ಕಾನೂನಿಗೆ ತಿದ್ದುಪಡಿ ತರಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

ಈ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ CL5 ಪರವಾನಿಗೆಯನ್ನು ವಿತರಿಸಲಾಗಿದೆ ; (ವಿವರ ನೀಡುವುದು)

ಉ) ಕುಟುಂಬದ ಕಾರ್ಯಕ್ರಮಗಳು ನಡೆಯುವ ಸ್ಥಳಕ್ಕೆ ಅಬಕಾರಿ ಪೊಲೀಸ್ ದಾಳಿ ನಡೆಸಿ, ಎಷ್ಟು ಕೇಸುಗಳನ್ನು ಯಾವ ಯಾವ ಜಿಲ್ಲೆಯಲ್ಲಿ ದಾಖಲು ಮಾಡಿದ್ದಾರೆ ; ಕೊಡಗು, ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಶೌಚಾಲಯಕ್ಕಾಗಿ ಸಮರ ಯೋಜನೆಯ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೫೭ (೩೦೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಶೌಚಾಲಯಕ್ಕಾಗಿ ಸಮರ ಎಂಬ ಹೆಸರಿನಲ್ಲಿ ಪ್ರಚಾರದ ಮೂಲಕ ನಿರ್ಮಲ ಭಾರತ ಯೋಜನೆಯನ್ನು ಅನುಷ್ಠಾನಗೊಳಿಸಿರುವುದು ಸರಿಯೇ ; ಬೆಳಗಾವಿ ಜಿಲ್ಲೆಯಲ್ಲಿ ಅನುದಾನ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ನಿರ್ಮಿಸಿರುವ ಶೌಚಾಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಪಂಚಾಯತಿವಾರು ಫಲಾನುಭವಿಗಳ ಹೆಸರು ಸಹಿತ ಮಾಹಿತಿ ನೀಡುವುದು)

(ಇ) ಈಗಾಗಲೇ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಪಂಚಾಯಿತಿವಾರು ಮಾಹಿತಿ ನೀಡುವುದು)

ಈ) ಇನ್ನೂ ಬಿಡಗಡೆ ಮಾಡಬೇಕಾದ ಅನುದಾನವೆಷ್ಟು ? (ಪಂಚಾಯಿತಿವಾರು ಫಲಾನುಭವಿವಾರು ಮಾಹಿತಿ ನೀಡುವುದು)

## ಕಡು ಬಡವರಿಗೆ ವಸತಿ ಒದಗಿಸಲು ಕ್ರಮಕೈಗೊಳ್ಳುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೫೮ (೪೨೫) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನಲ್ಲಿ ಶೇ.೪೦% ಗಿಂತ ಹೆಚ್ಚು ಕಡುಬಡವರಿದ್ದು, ವಸತಿ ಇಲ್ಲದೆ ತೊಂದರೆಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜೀವ್ ಗಾಂಧಿ ವಸತಿ ಯೋಜನೆಯಲ್ಲಿ ಕಳೆದ ೦೨ ವರ್ಷಗಳಿಂದೀಚೆಗೆ ಬೆಂಗಳೂರಿನ ಯಾವ–ಯಾವ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಎಷ್ಟೆಷ್ಟು ಜಮೀನನ್ನು ಖರೀದಿಸಲಾಗಿದೆ ; ಹಾಗೂ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ;

(ಇ) ಬೆಂಗಳೂರಿನ ಬಸವನಗುಡಿ ವಿಧಾನಸಭಾ ಕ್ಷೇತ್ರಕ್ಕೆ ಮೇಲ್ಕಂಡ ನಿಗಮದಿಂದ ಕಳೆದ ೦೨ ವರ್ಷಗಳಲ್ಲಿ ನಿರ್ಮಿಸಿರುವ ಮನೆಗಳೆಷ್ಟು ; ಇಲ್ಲದಿದ್ದಲ್ಲಿ, ಅಲ್ಲಿನ ಕಡುಬಡವರಿಗೆ ಕೂಡಲೆ ವಸತಿ ಒದಗಿಸುವಲ್ಲಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೫೯ (೩೨೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಅಂಗನವಾಡಿ ಕೇಂದ್ರಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು ; (ಮಕ್ಕಳ ಹೆಸರುಗಳೊಂದಿಗೆ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಪ್ರತಿ ಅಂಗನವಾಡಿ ಕೇಂದ್ರಕ್ಕೆ ಎಷ್ಟು ಪ್ರಮಾಣದಲ್ಲಿ ಯಾವ ಯಾವ ಆಹಾರ ಧಾನ್ಯಗಳನ್ನು ಒದಗಿಸಲಾಗುತ್ತಿದೆ ; (ಪ್ರತ್ಯೇಕವಾಗಿ ಅಂಗನವಾಡಿ, ಕೇಂದ್ರಗಳವಾರು, ಗ್ರಾಮಗಳ ಮತ್ತು ತಾಲ್ಲೂಕುವಾರು ವಿವರ ನೀಡುವುದು)

ಈ) ಬೀದರ್ ಜಿಲ್ಲೆಯಲ್ಲಿ ೨೦೦೬–೨೦೦೭ನೇ ಸಾಲಿನ ಭಾಗ್ಯಲಕ್ಷ್ಮಿ ಬಾಂಡ್‌ಗಳನ್ನು ಸುಮಾರು ೯ ವರ್ಷಗಳು ಕಳೆದರೂ ಸಹ ವಿತರಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಉ) ಬಂದಿದ್ದಲ್ಲಿ, ವಿತರಿಸಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ವಿಳಂಬಕ್ಕೆ ಕಾರಣಗಳೇನು ; ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಯಾವ ಕ್ರಮಕೈಗೊಳ್ಳಲಿದೆ ; ಯಾವ ಕಾಲಮಿತಿಯೊಳಗೆ ವಿತರಿಸಲಾಗುವುದು ? (ವಿವರ ನೀಡುವುದು)

## ಬಡವರಿಗೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮನೆ ಹಂಚಿಕೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೬೦ (೪೫೧) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುರುವೇಕೆರೆ ವಿಧಾನ ಸಭಾ ಕ್ಷೇತ್ರದಲ್ಲಿ ಕಳೆದ ೨ ವರ್ಷಗಳಿಂದ ವಿವಿಧ ವಸತಿ ಯೋಜನೆ ಅಡಿಯಲ್ಲಿ ಯಾವ ಯಾವ ಗ್ರಾಮದಲ್ಲಿ ಯಾರು ಯಾರಿಗೆ ಮನೆಗಳನ್ನು ಮಂಜೂರು ಮಾಡಲಾಗಿದೆ ; (ಪಂಚಾಯತಿವಾರು ವಿವರ ನೀಡುವುದು)

(ಆ) ಮಂಜೂರು ಮಾಡಲು ಇರುವ ಮಾನದಂಡಗಳೇನು ; (ವಿವರ ಕೊಡುವುದು)

(ಇ) ಹಾಗಿದ್ದಲ್ಲಿ, ಸರ್ಕಾರ ನೀಡಿರುವ ಮನೆಗಳನ್ನು ನೀಡಲು ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಯಾವಾಗ, ಎಲ್ಲಿ, ಗ್ರಾಮಸಭೆ ನಡೆಸಲಾಗಿದೆ ;

ಗ್ರಾಮಸಭೆಗಳ ದಿನಾಂಕ, ಆಯ್ಕೆ ವಿಧಾನಗಳ ಬಗ್ಗೆ ಪೂರ್ಣ ವಿವರ ನೀಡುವುದು ; ಆಯ್ಕೆಯಾಗಿರುವ ಫಲಾನುಭವಿಗಳ ಹೆಸರು ಹಾಗೂ ಗ್ರಾಮದ ಸಮೇತ ಆಯ್ಕೆ ಪಟ್ಟಿ ನೀಡುವುದು ;

ಈ) ಗ್ರಾಮ ಸಭೆ ನಂತರ ತಾಲ್ಲೂಕು ಆಯ್ಕೆ ಸಮಿತಿಯ ಕರ್ತವ್ಯವೇನು ; ಆಯ್ಕೆ ಸಮಿತಿಯಲ್ಲಿರುವ ಪದಾಧಿಕಾರಿಗಳು ಯಾರು ;

ಉ) ವಸತಿ ವಿತರಣೆಯಲ್ಲಿ ನಡೆದಿರುವ ಅವ್ಯವಹಾರ ಪ್ರಕರಣಗಳ ಸಂಖ್ಯೆ ಎಷ್ಟು ; ಸಂಬಂಧಪಟ್ಟ ತಪ್ಪಿತಸ್ಥರ ಮೇಲೆ ಸರ್ಕಾರ ತೆಗೆದುಕೊಂಡ ಶಿಸ್ತು–ಕ್ರಮಗಳೇನು ? (ಪ್ರಕರಣವಾರು ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. ಪಿಡಬ್ಲ್ಯೂಎಸ್–1035 – ಪ್ರತಿಗಳು – 1500 – ಪಿ2